# Kuvempu University Library

Jnana Sahyadri, Shankaraghatta

## News Paper Clipping Service from Digital Library

**Date: 14-06-2016**

| Sl. No. | Name of the Paper | No. of Clippings |
|---|---|---|
| 01 | Prajavani | 01 |

# ಪ್ರೊ.ಮಹೇಶಪ್ಪ ಮೇಲ್ಮನವಿ ವಿಚಾರಣೆ ಜೂನ್ 15ಕ್ಕೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ತಮ್ಮ ಅಮಾನತು ಆದೇಶ ಪ್ರಶ್ನಿಸಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು) ಕುಲಪತಿ ಪ್ರೊ.ಎಚ್.ಮಹೇಶಪ್ಪ ಅವರು ಹೈಕೋರ್ಟ್ ವಿಭಾಗೀಯ ಪೀಠದಲ್ಲಿ ಮೇಲ್ಮನವಿ ಸಲ್ಲಿಸಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಎಸ್.ಕೆ. ಮುಖರ್ಜಿ ಹಾಗೂ ನ್ಯಾಯಮೂರ್ತಿ ರವಿ ಮಳಿಮಠ ಅವರಿದ್ದ ಪೀಠವು ವಿಚಾರಣೆಯನ್ನು ಜೂನ್ 15ಕ್ಕೆ ಮುಂದೂಡಿದೆ.

ಮಹೇಶಪ್ಪ ಅವರನ್ನು ಅಮಾನತು ಮಾಡಿದ್ದ ರಾಜ್ಯಪಾಲರ ಕ್ರಮವನ್ನು ಏಕ ಸದಸ್ಯ ಪೀಠವು ಎತ್ತಿ ಹಿಡಿದಿತ್ತು. ಇದನ್ನು ಈಗ ಪ್ರಶ್ನಿಸಲಾಗಿದೆ.

ವಿಟಿಯುನಲ್ಲಿ ನಡೆದಿವೆ ಎನ್ನಲಾದ ಅಕ್ರಮಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಕೆ.ಎನ್.ಕೇಶವನಾರಾಯಣ ಅವರ ಸತ್ಯ ಶೋಧನಾ ಸಮಿತಿಯು ರಾಜ್ಯಪಾಲರಿಗೆ ವರದಿ ಸಲ್ಲಿಸಿತ್ತು.

ಈ ವರದಿ ಆಧಾರದ ಮೇಲೆ ರಾಜ್ಯಪಾಲರು ಮಾರ್ಚ್ 14ರಂದು ಮಹೇಶಪ್ಪ ಅವರನ್ನು ಕುಲಪತಿ ಸ್ಥಾನದಿಂದ ಅಮಾನತುಗೊಳಿಸಿದ್ದರು.